ಕೆರೆ ನಿರ್ಮಾಣ

1109 (1855) ಶ್ರೀ ಅನಿಲ್ ಲಾಡ್ (ಬಳ್ಳಾರಿ ನಗರ):– ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಬಳ್ಳಾರಿ ನಗರದ ಸಾರ್ವಜನಿಕರಿಗೆ ಪ್ರತಿ 15 ದಿನಕ್ಕೊಮ್ಮೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನಗರದ ಸಾರ್ವಜನಿಕರಿಗೆ ಸಮಗ್ರವಾಗಿ ಕುಡಿಯುವ ನೀರು ಸರಬರಾಜು ಮಾಡಲು ಮೋಕ ಕೆರೆ ಹತ್ತಿರ ಮೀಸಲಿಟ್ಟಿರುವ 200 ಎಕರೆ ಸರ್ಕಾರದ ಜಮೀನಿನಲ್ಲಿ ಹೊಸದಾಗಿ ನೀರಿನ ಕೆರೆಯನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು):–

(ಅ) ವಿದ್ಯುತ್ ವ್ಯತ್ಯಯ ಮುಖ್ಯ ಪೈಪ್‌ಲೈನ್ ದುರಸ್ತಿ ಕಾರ್ಯ ಮತ್ತು ಮೋಟಾರ್ ಪಂಪ್ ದುರಸ್ತಿ ಸಂದರ್ಭಗಳಲ್ಲಿ ವ್ಯತ್ಯಯ ಉಂಟಾದಲ್ಲಿ ಮಾತ್ರ ಸಾರ್ವಜನಿಕರಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲು ವ್ಯತ್ಯಯ ಉಂಟಾಗುವುದು. ಇಲ್ಲವಾದಲ್ಲಿ ಹಾಲಿ 4–5 ದಿನಗಳಿಗೊಮ್ಮೆ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ.

(ಆ) ಇಲ್ಲ

(ಇ) ಪ್ರಸ್ತಾವನೆ ಬಂದ್ದಲ್ಲಿ, ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.

ನ್ಯಾಯಾಲಯಗಳಲ್ಲಿ ಖಾಲಿ ಹುದ್ದೆಗಳ ಭರ್ತಿ

1110 (1253) ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ):– ಮಾನ್ಯ ಕಾನೂನು ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಕೊಡಗು ಜಿಲ್ಲೆಯ ನ್ಯಾಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

ಶ್ರೀ ಟಿ.ಬಿ. ಜಯಚಂದ್ರ ಮಾನ್ಯ ಕಾನೂನು ಸಚಿವರು:–

(ಅ) ಕೊಡಗು ಜಿಲ್ಲೆಯ ನ್ಯಾಯಾಲಯಗಳಲ್ಲಿ ಒಟ್ಟು 166 ಹುದ್ದೆಗಳು ಖಾಲಿ ಇರುತ್ತವೆ.

(ಆ) ಈ ಖಾಲಿ ಹುದ್ದೆಗಳನ್ನು ಭರ್ತಿಮಾಡುವ ನಿಟ್ಟಿನಲ್ಲಿ ಸದ್ಯಕ್ಕೆ 92 ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರದಿಂದ ಅನುಮತಿ ನೀಡಿದೆ.

ನ್ಯಾಯಾಲಯದ ಕಟ್ಟಡ ಕಾಮಗಾರಿ

1111 (1254) **ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ):–** ಮಾನ್ಯ ಕಾನೂನು ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ನ್ಯಾಯಾಲಯದ ಕಟ್ಟಡ ಕಾಮಗಾರಿಯು ಪ್ರಾರಂಭವಾಗಿದೆಯೇ;

(ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಎಂದು ಪೂರ್ಣಗೊಳಿಸಲಾಗುವುದು ?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಸಚಿವರು):–

(ಅ) ಮಡಿಕೇರಿಯ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಹಾಗೂ ವಿರಾಜಪೇಟೆ ತಾಲ್ಲೂಕು ಪೊನ್ನಂಪೇಟೆ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯಗಳ ಸಂಕೀರ್ಣ ನಿರ್ಮಾಣ ಕಾಮಗಾರಿಗಳು ಪ್ರಾರಂಭವಾಗಿರುತ್ತವೆ.

(ಆ) ಮಡಿಕೇರಿಯ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣದ ಕಾಮಗಾರಿಯು ಮಾರ್ಚ್–2016 ರಲ್ಲಿ ಹಾಗೂ ವಿರಾಜಪೇಟೆ ತಾಲ್ಲೂಕಿನ ಪೊನ್ನಂಪೇಟೆ ನ್ಯಾಯಾಲಯ ಸಂಕೀರ್ಣದ ಕಾಮಗಾರಿಯು ಆಗಸ್ಟ್–2015 ರಲ್ಲಿ ಪೂರ್ಣಗೊಳಿಸಲಾಗುವುದು.

ಪೊಲೀಸ್ ಠಾಣೆಗೆ ಹೊಸ ವಾಹನ ಒದಗಿಸುವುದು

1112 (1256) **ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ):–** ಮಾನ್ಯ ಗೃಹ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಪೊಲೀಸ್ ಠಾಣೆಯಲ್ಲಿರುವ ಹಳೆಯ ವಾಹನಗಳನ್ನು ಹಿಂಪಡೆದು ಹೊಸ ವಾಹನಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು):–

(ಅ) ಹೌದು

(ಆ) ಹಳೆಯ ವಾಹನಗಳ ಬದಲಿಗೆ 299 ಹೊಸ ಜೀಪುಗಳನ್ನು ಖರೀದಿಸಲು ಮಂಜೂರಾತಿ ನೀಡಲಾಗಿದ್ದು, ವಾಹನಗಳನ್ನು ಖರೀದಿಸುವ ಪ್ರಕ್ರಿಯೆ ನಡೆಯುತ್ತಿದೆ.